**ಓ. ಎಸ್. ನಂ. 17 / 2016** **ಡಿ ಡಬ್ಲ್ಯೂ – 1**

**ದಿನಾಂಕಃ 02.08.2023 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲು – ವಾದಿ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯದಲ್ಲಿ ನನ್ನ ಸಹೋದರಿ ವಾದಿಗೆ 9 ನಿವೇಶನಗಳನ್ನು ನೀಡಿರುವುದಾಗಿ ತಿಳಿಸಿರುತ್ತೇನೆಂದರೆ ಸರಿ. ಅದರ ಸಂಖ್ಯೆ 277/1 ರಿಂದ 277/9 ಆಗಿರುತ್ತದೆ. ಅ ಬಗ್ಗೆ ತೋರಿಸಲು ದಾಖಲಾತಿಗಳನ್ನು ಹಾಜರು ಪಡಿಸಿಲ್ಲ ಎಂದರೆ ಸರಿ. ಈ ದಾವೆ ಚಾಲ್ತಿಯಲ್ಲಿರುವಾಗಲೇ ಕೆಲವು ನಿವೇಶನಗಳನ್ನು ಮಾರಾಟ ಮಾಡಿರುತ್ತೇನೆಂದರೆ ಸರಿ. ಈ ದಾವೆಯಲ್ಲಿ ತೋರಿಸಿರುವಂತಹ ದಾವಾ ಸ್ವತ್ತುಗಳನ್ನು ಹೊರತುಪಡಿಸಿ ನಮ್ಮ ಅವಿಭಕ್ತ ಕುಟುಂಬಕ್ಕೆ ಬೇರೆ ಆಸ್ತಿಗಳಿರುವುದಿಲ್ಲ. ನಾನು 2018 ರಲ್ಲಿ ಮಾರಾಟ ಮಾಡಿದಂತಹ ಆಸ್ತಿಗಳನ್ನು ಮಾರಾಟ ಮಾಡಲು ನ್ಯಾಯಾಲಯದ ಅನುಮತಿ ಪಡೆದುಕೊಂಡಿರುವುದಿಲ್ಲ. ನನಗೆ ವ್ಯವಸಾಯದಿಂದ ಬರುವ ಉತ್ಪತ್ತಿಯನ್ನು ಹೊರತು ಪಡಿಸಿ ಬೇರೆ ಆದಾಯದ ಮೂಲಗಳಿರುವುದಿಲ್ಲ. ದಾವಾ ಸ್ವತ್ತುಗಳು ನಮ್ಮ ಒಟ್ಟು ಕುಟುಂಬಕ್ಕೆ ಸಂಬಂಧಪಟ್ಟ ಆಸ್ತಿಗಳೆಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನನ್ನ ತಂದೆಯವರೇ ಭಾಗ ಮಾಡಿಕೊಟ್ಟಿರುತ್ತಾರೆಂದು ನುಡಿಯುತ್ತಾರೆ. ಯಾರು ಯಾರಿಗೆ ಯಾವ ಯಾವ ಆಸ್ತಿಗಳು ಹೋಗಿರುತ್ತವೆ ಎಂದು ನನ್ನ ಪ್ರತಿವಾದ ಪತ್ರದಲ್ಲಿ ತಿಳಿಸಿರುವುದಿಲ್ಲ. ಈವತ್ತಿನವರೆಗೂ ಈ ದಾವೆಯಲ್ಲಿ ಹಾಜರು ಪಡಿಸಿರುವಂತಹ ದಾಖಲಾತಿಗಳನ್ನು ಹೊರತು ಪಡಿಸಿ ಬೇರೆ ದಾಖಲೆಗಳು ನನ್ನ ಬಳಿ ಇರುವುದಿಲ್ಲ. ನನ್ನ ಸಹೋದರಿಗೆ ದಾವಾ ಸ್ವತ್ತುಗಳಲ್ಲಿ ಭಾಗ ಕೊಡಬೇಕಾಗುತ್ತದೆ ಎಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು.

ಓ ಹೇ ಕೇ ಸಾ ಸ ಇ ಒ

(ಆನಂದ ಎಂ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂ. ಕೊಳ್ಳೇಗಾಲ.